ಈ ಯೋಜನೆಗಾಗಿ ಜನವರಿ 1995 ರ ಅಂತ್ಯದವರೆಗೆ 1689.71 ಲಕ್ಷ ರೂಪಿಗಳನ್ನು ಪೂರ್ಣಗೊಳಿಸಲು ಪರಿಷ್ಕೃತ ಅಂದಾಜಿನ ಮೊತ್ತ ಸುಮಾರು 2400 ಲಕ್ಷಗಳು ಆಗಬಹುದು.

ರಾಜ್ಯದಲ್ಲಿ ವಿದೇಶಿ ಸಂಸ್ಥೆಗಳಿಂದ ಕೈಗಾರಿಕೆಗಳನ್ನು ಪ್ರಾರಂಭಿಸಲು ಉತ್ತೇಜನ ನೀಡುವುದು

351 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅನಿವಾಸಿ ಭಾರತೀಯರು ಹಾಗೂ ವಿದೇಶಿ ಸಂಸ್ಥೆಗಳು ಕೈಗಾರಿಕೆಗಳನ್ನು ಪ್ರಾರಂಭಿಸಲು ಮುಂದೆ ಬಂದಲ್ಲಿ ಅವರುಗಳಿಗೆ ಸರ್ಕಾರದವರು ಯಾವ ತರಹದ ಉತ್ತೇಜನಗಳು ಮತ್ತು ರಿಯಾಯಿತಿಗಳನ್ನು ನೀಡುತ್ತಾರೆ.

ಆ) ಈ ಸಂಬಂಧವಾಗಿ ಇತ್ತೀಚೆಗೆ ಕೈಗಾರಿಕಾ ಸಚಿವರು ವಿದೇಶ ಪ್ರವಾಸ ಮಾಡಿದ ಸಂದರ್ಭದಲ್ಲಿ ರಾಜ್ಯದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಅನಿವಾಸಿ ಭಾರತೀಯರಾಗಲಿ ಒಲವು ವ್ಯಕ್ತ ಪಡಿಸಿರುವುದು ನಿಜವೆ?

ಇ) ಈ ವಿಷಯಕ್ಕೆ ಸಂಬಂಧಿಸಿದಂತೆ ಎಷ್ಟು ವಿದೇಶಿ ಕಂಪನಿಗಳ ಜೊತೆ ಒಪ್ಪಂದ್ಕೆ ಸಹಿ ಮಾಡಲಾಗಿದೆ?

ಈ) ಸಚಿವರ ವಿದೇಶಿ ಪ್ರವಾಸದಿಂದ ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಯಾವ ರೀತಿ ಸಹಕಾರಿಯಾಗಲಿದೆ?

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು): ಅ) ಅನಿವಾಸಿ ಭಾರತೀಯರು ಹಾಗೂ ವಿದೇಶಿ ಸಂಸ್ಥೆಗಳಿಗೆ ಸ್ಥಳೀಯ ಉದ್ಯಮಿದಾರರಿಗೆ ನೀಡುವ ರೀತಿಯಲ್ಲಿಯೇ ರಿಯಾಯಿತಿ ಮತ್ತು ಪ್ರೋತ್ಸಾಹಗಳನ್ನು ರಾಜ್ಯ ಸರ್ಕಾರದ ಕೈಗಾರಿಕಾ ನೀತಿಗೆ ಅನುಗುಣವಾಗಿ ನೀಡಲಾಗುವುದು.

ಆ) ಹೌದು. ಈ ಬಗ್ಗೆ ಹಲವಾರು ವಿದೇಶಿ ಕಂಪನಿಗಳು ರಾಜ್ಯದಲ್ಲಿ ಕೈಗಾರಿಕೆ ಸ್ಥಾಪನೆಗೆ ಆಸಕ್ತಿ ತೋರಿಸಿದೆ.

ಇ) ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಮತ್ತು ಅಭಿವೃದ್ಧಿ ನಿಗಮ ನಿಯಮಿತವು ಐದು ಇಸ್ರೇಲಿ ಕಂಪನಿಗಳೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿದೆ.

ಈ) ಸಚಿವರು ವಿದೇಶದಲ್ಲಿ ಪ್ರವಾಸ ಮಾಡಿದಾಗ ರಾಜ್ಯದಲ್ಲಿ ಕೈಗಾರಿಕಾ ಬೆಳವಣಿಗೆಗೆ ಇಂದು ಅನುಕೂಲಕರ ಅವಕಾಶ ಇರುವುದನ್ನು ವಿದೇಶಿ ಉದ್ಯಮಿದಾರರಿಗೆ ಮನದಟ್ಟು ಮಾಡಿಕೊಟ್ಟಿರುತ್ತಾರೆ. ಹೀಗಾಗಿ ಹಲವಾರು ಉದ್ಯಮಿದಾರರು ರಾಜ್ಯದಲ್ಲಿ ಆಧುನಿಕ ತಂತ್ರಜ್ಞಾನದ ಉದ್ಯಮಗಳನ್ನು ಸ್ಥಾಪಿಸಲು ಮುಂದೆ ಬಂದಿರುತ್ತಾರೆ.

ನಷ್ಟದಲ್ಲಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳ ಪುನಶ್ಚೇತನದ ಬಗ್ಗೆ

352 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಮಾನ್ಯ ಸಕ್ಕರೆ, ಜವಳಿ ಮತ್ತು ಪರಿಸರ ಮಾಲಿನ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಹಕಾರ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು; (ಈ ಕಾರ್ಖಾನೆಗಳ ಹೆಸರು ಹಾಗೂ ಇವುಗಳ ವಾರ್ಷಿಕ ಉತ್ಪನ್ನಗಳ ಮಾಹಿತಿ ನೀಡುವುದು)

ಆ) ಈ ಸಹಕಾರಿ ಸಕ್ಕರೆ ಕಾರ್ಖಾನೆಗಳಲ್ಲಿರುವ ಸರ್ಕಾರ ಪೇರುಗಳ ಮೊತ್ತವೆಷ್ಟು;